# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** **ಬೆಳಗಾವಿ ವಿಭಾಗದ** ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪ.ಪೂ ಕಾಲೇಜು, ಮಾದರಿ ವಸತಿ ಶಾಲೆ(ನವೋದಯ) ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳ ನಿರ್ವಹಣೆಗೆ 1ನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:** 1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021 ದಿನಾಂಕ: 12.04.2021

2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021 ದಿನಾಂಕ: 27.04.2021

>>>\$<<<

**ಪ್ರಸ್ತಾವನೆ:-**

ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ 2020-21 ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2021-22 ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ(2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆಗೆ 1ನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

**ಬೆಳಗಾವಿ ವಿಭಾಗದ** ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಸರ್ಕಾರಿ ಮುಸ್ಲಿಂ ವಸತಿಶಾಲೆಗಳ ನಿರ್ವಹಣೆಗೆ (ಆಹಾರ ವೆಚ್ಚ, ಕಟ್ಟಡಗಳ ಸಣ್ಣಪುಟ್ಟ ರಿಪೇರಿ, ಸ್ವಚ್ಛತೆ ಸಾಮಾಗ್ರಿಗಳು, ರಾಷ್ಟ್ರಿಯ ಹಬ್ಬ/ಆಚರಣೆಗಳು ಹಾಗೂ ಇತರೆ) 1 ನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆಗೊಳಿಸುವಂತೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಕೋರಿರುತ್ತಾರೆ.

ಅದರಂತೆ **ಬೆಳಗಾವಿ ವಿಭಾಗದ** ಅಲ್ಪಸಂಖ್ಯಾತರ ವಸತಿಶಾಲೆ/ಕಾಲೇಜುಗಳ ನಿರ್ವಹಣೆಗೆ (ಆಹಾರ ವೆಚ್ಚ, ಕಟ್ಟಡಗಳ ಸಣ್ಣಪುಟ್ಟ ರಿಪೇರಿ, ಸ್ವಚ್ಛತೆ ಸಾಮಾಗ್ರಿಗಳು, ರಾಷ್ಟ್ರಿಯ ಹಬ್ಬ/ಆಚರಣೆಗಳು ಹಾಗೂ ಇತರೆ) 1ನೇ ತ್ರೈಮಾಸಿಕ ಕಂತಾಗಿ **ಅನುಬಂಧ-04** ರಲ್ಲಿ ನಮೂದಿಸಿರುವ ಜಿಲ್ಲಾವಾರು ಶಾಲೆ/ಕಾಲೇಜುಗಳಿಗೆ ಒಟ್ಟು **ರೂ.2,84,90,800/-(ಎರಡು ಕೋಟಿ ಎಂಭತ್ತಾಲ್ಕು ಲಕ್ಷದ ತೊಂಬತ್ತು ಸಾವಿರದ ಎಂಟು ನೂರು ರೂ.ಗಳು ಮಾತ್ರ)**ಗಳ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## ಆದೇಶ

**ಸಂಖ್ಯೆ: ಅಸಂನಿ/ಆ/ವಶಾ/ಅನು/ಸಿಆರ್-04(059)/2021-22** **ದಿನಾಂಕ: 18 .05.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ, **ಅನುಬಂಧ-04** ರಲ್ಲಿ ನಮೂಧಿಸಿರುವ **ಬೆಳಗಾವಿ ವಿಭಾಗದ** ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಮತ್ತು ಸರ್ಕಾರಿ ಮುಸ್ಲಿಂ ವಸತಿಶಾಲೆಗಳ ನಿರ್ವಹಣೆಗೆ (ಆಹಾರ ವೆಚ್ಚ, ಕಟ್ಟಡಗಳ ಸಣ್ಣಪುಟ್ಟ ರಿಪೇರಿ, ಸ್ವಚ್ಛತೆ ಸಾಮಾಗ್ರಿಗಳು, ರಾಷ್ಟ್ರಿಯ ಹಬ್ಬ/ಆಚರಣೆಗಳು ಹಾಗೂ ಇತರೆ) 1ನೇ ತ್ರೈಮಾಸಿಕ ಕಂತಾಗಿ ಒಟ್ಟು **ರೂ.2,84,90,800/-(ಎರಡು ಕೋಟಿ ಎಂಭತ್ತಾಲ್ಕು ಲಕ್ಷದ ತೊಂಬತ್ತು ಸಾವಿರದ ಎಂಟು ನೂರು ರೂ.ಗಳು ಮಾತ್ರ)**ಗಳ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** ರವರಿಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

Contd....2

ನಿಬಂಧನೆಗಳು:-

1) ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು **ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳತಕ್ಕದ್ದು,** ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.
2) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಇಲಾಖೆ, ರವರು ಕಡ್ಡಾಯವಾಗಿ ಸಂಬಂಧಪಟ್ಟ ಶಾಲೆ/ಕಾಲೇಜುಗಳ DDO ಕೋಡ್‌ಗೆ ಮರು ಬಿಡುಗಡೆಗೊಳಿಸಿ ಖರ್ಚು ವೆಚ್ಚಗಳನ್ನು ಭರಿಸುವುದು.
3) ಎಲ್ಲಾ ಖರೀದಿ ಹಾಗೂ ಸೇವೆಗಳನ್ನು ಕಡ್ಡಾಯವಾಗಿ ಕೆ.ಟಿ.ಪಿ.ಪಿ. ಕಾಯ್ದೆ ನಿಯಮಾನುಸಾರ ಖರ್ಚು ಭರಿಸತಕ್ಕದ್ದು.
4) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಸಂಬಂಧಪಟ್ಟ ವಸತಿಶಾಲೆಗಳ ಪ್ರಾಂಶುಪಾಲರಿಗೆ ನಿಯಮಾನುಸಾರ ಮರುಬಿಡುಗಡೆಗೊಳಿಸಿ ಖರ್ಚು ಭರಿಸತಕ್ಕದ್ದು.
5) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದಲ್ಲಿ 2021-22ನೇ ಸಾಲಿನ 1ನೇ ತ್ರೈಮಾಸಿಕ ಆಹಾರ & ನಿರ್ವಹಣೆಯ ಜೊತೆಗೆ 2020-21ನೇ ಸಾಲಿನ ವಸತಿ ಶಾಲೆ/ಕಾಲೇಜುಗಳ ಬಾಕಿ ವೆಚ್ಚಗಳನ್ನು ಸಂಪೂರ್ಣವಾಗಿ ಪಾವತಿಸತಕ್ಕದ್ದು.
6) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನ ಭರಿಸಿದ ವಿವರ ಪ್ರತಿ ತಿಂಗಳು 10ನೇ ತಾರೀಖಿನ ಒಳಗೆ (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಆಬ್ಜೆಕ್ಟ್ ಕೋಡ್ (059) ಲೆಕ್ಕಶೀರ್ಷಿಕೆ 2225-04-277-0-10 ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆ 2021-22ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಭರಿಸುವುದು.

**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

ಪ್ರತಿಯನ್ನು:-
1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಅನುಬಂಧ-04 ರಲ್ಲಿ ನಮೂದಿಸಿರುವ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
5. ಅನುಬಂಧ-04 ರಲ್ಲಿ ನಮೂದಿಸಿರುವ ಜಿಲ್ಲೆಗಳ ಉಪ ನಿರ್ದೇಶಕರು, ಜಿಲ್ಲಾ ಖಜಾನೆ
6. ಲೆಕ್ಕಪತ್ರ ಶಾಖೆ.
7. ಹೆಚ್ಚುವರಿ ಪ್ರತಿ/ಕಛೇರಿ ಪ್ರತಿ.